**Akashvani : Bangalore**
**National Bulletin In Kannada**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**04.05.2024 / 19.35 hrs**

**<><*<><>*><>**

ಮುಖ್ಯಾಂಶಗಳು

೧. ಲೋಕಸಭಾ ಮೂರನೇ ಹಂತದ ಚುನಾವಣೆ; ಬಹಿರಂಗ ಪ್ರಚಾರಕ್ಕೆ ನಾಳೆ ತೆರೆ

೨. ವಿವಿಧ ರಾಜಕೀಯ ಪಕ್ಷಗಳಿಂದ ರ್‍ಯಾಲಿ, ರೋಡ್ ಶೋ

೩. ತಮ್ಮ ಸರ್ಕಾರದ ವಿರುದ್ಧ ಯಾವುದೇ ಭ್ರಷ್ಟಾಚಾರ ಆಪಾದನೆ ಇಲ್ಲ - ನರೇಂದ್ರ ಮೋದಿ; ಕರ್ನಾಟಕದ ಗ್ಯಾರಂಟಿ ಯೋಜನೆಗಳು ದೇಶಕ್ಕೆ ಮಾದರಿ- ಪ್ರಿಯಾಂಕಾ ಗಾಂಧಿ

೪. ೨೩ ದೇಶಗಳ ಅಂತಾರಾಷ್ಟ್ರೀಯ ಪ್ರತಿನಿಧಿಗಳಿಂದ ಭಾರತದ ಚುನಾವಣೆ ವೀಕ್ಷಣೆ

೫. ಐಪಿಎಲ್ ಟಿ-೨೦ ಕ್ರಿಕೆಟ್; ರಾಯಲ್ ಚಾಲೆಂಜರ್ಸ್ ಬೆಂಗಳೂರು - ಗುಜರಾತ್ ಟೈಟಾನ್ಸ್ ಮುಖಾಮುಖಿ

**<><*<><>*><>**

ಲೋಕಸಭೆಯ ಮೂರನೇ ಹಂತದ ಚುನಾವಣೆಗೆ ಸಮಯ ಸನ್ನಿಹಿತವಾಗುತ್ತಿದ್ದಂತೆಯೇ ವಿವಿಧ ರಾಜಕೀಯ ಪಕ್ಷಗಳಿಂದ ಬಿರುಸಿನ ಪ್ರಚಾರ ನಡೆದಿದೆ. ಈ ಕ್ಷೇತ್ರಗಳಲ್ಲಿ ಬಹಿರಂಗ ಪ್ರಚಾರಕ್ಕೆ ನಾಳೆ ಕೊನೆಯದಿನವಾಗಿದೆ. ಮೂರನೇ ಹಂತದಲ್ಲಿ ಹತ್ತು ರಾಜ್ಯಗಳು ಮತ್ತು ಒಂದು ಕೇದ್ರಾಡಳಿತ ಪ್ರದೇಶಗಳ ೯೩ ಸ್ಥಾನಗಳಿಗೆ ಇದೇ ಮಂಗಳವಾರ ೭ ರಂದು ಮತದಾನ ನಡೆಯಲಿದೆ.

**<><*<><>*><>**

ಕರ್ನಾಟಕದ ಚಿಕ್ಕೋಡಿ, ಬೆಳಗಾವಿ, ಬಾಗಲಕೋಟೆ, ವಿಜಯಪುರ, ಕಲಬುರಗಿ, ರಾಯಚೂರು, ಬೀದರ್, ಕೊಪ್ಪಳ, ಬಳ್ಳಾರಿ, ಹಾವೇರಿ, ಧಾರವಾಡ, ಉತ್ತರಕನ್ನಡ, ದಾವಣಗೆರೆ ಮತ್ತು ಶಿವಮೊಗ್ಗ ಕ್ಷೇತ್ರಗಳಲ್ಲಿ ಮಂಗಳವಾರ ಮತದಾನ ನಿಗದಿಯಾಗಿದೆ. ಒಟ್ಟು ೧೪ ಕ್ಷೇತ್ರಗಳಲ್ಲಿ ಒಟ್ಟು ೨೨೭ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಈ ಕ್ಷೇತ್ರಗಳಲ್ಲಿ ಒಟ್ಟಾರೆ ೨ ಕೋಟಿ ೫೯ ಲಕ್ಷ ೧೭ ಸಾವಿರದ ೪೯೩ ಮತದಾರರು ಇದ್ದಾರೆ. ಈ ಹಂತದಲ್ಲಿ ಮಹಿಳಾ ಮತದಾರರೇ ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ.

**<><*<><>*><>**

ನಾಳೆ ಬಹಿರಂಗ ಪ್ರಚಾರ ಕೊನೆಗೊಳ್ಳುತ್ತಿರುವ ಲೋಕಸಭಾ ಕ್ಷೇತ್ರಗಳಲ್ಲಿ ವಿವಿಧ ರಾಜಕೀಯ ಪಕ್ಷಗಳ ಧುರೀಣರು ಇಂದು ರ್‍ಯಾಲಿ ರೋಡ್ ಶೋ ನಡೆಸಿ, ತಮ್ಮ ಪಕ್ಷಗಳ ಅಭ್ಯರ್ಥಿಗಳ ಪರವಾಗಿ ಬಿರುಸಿನ ಪ್ರಚಾರ ನಡೆಸಿದರು.

**<><*<><>*><>**

ಬಿಜೆಪಿ ಹಿರಿಯ ನಾಯಕ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಬಿಹಾರದ ದರ್ಭಾಂಗದಲ್ಲಿಂದು ಸಾರ್ವಜನಿಕ ಸಭೆಯಲ್ಲಿ ಭಾಗವಹಿಸಿ ಮಾತನಾಡಿ, ತಮ್ಮ ಪಕ್ಷ ಮೂರನೇ ಅವಧಿಯ ಅಧಿಕಾರದಲ್ಲಿ ೭೦ ವರ್ಷ ಮೇಲ್ಪಟ್ಟ ಎಲ್ಲ ಹಿರಿಯರಿಗೆ ಆಯುಷ್ಮಾನ್ ಭಾರತ್ ಆರೋಗ್ಯ ಸೇವೆಯನ್ನು ಒದಗಿಸಲಿದೆ ಎಂದು ಆಶ್ವಾಸನೆ ನೀಡಿದರು.

ಧ್ವನಿ: ನರೇಂದ್ರ ಮೋದಿ

ಕಾಂಗ್ರೆಸ್ ಮತ್ತು ಐಎನ್‌ಡಿಐಎ ಮೈತ್ರಿ ಕೂಟ, ಧರ್ಮ ಆಧಾರಿತ ಮೀಸಲಾತಿ ನೀಡಲು ಮುಂದಾಗಿವೆ. ರಾಜಕೀಯ ಓಲೈಕೆಗಾಗಿ ಓಬಿಸಿ ಕೋಟಾದಲ್ಲಿ ಕಡಿತ ಮಾಡಲು ಬಯಸಿವೆ ಎಂದು ನರೇಂದ್ರ ಮೋದಿ ಆಪಾದಿಸಿದರು. ಇದಕ್ಕೂ ಮುನ್ನ ಜಾಖಂಡ್‌ನ ಪಲಮು ಮತ್ತು ಗುಮ್ಲಾ ಜಿಲ್ಲೆಗಳಲ್ಲಿ ಚುನಾವಣಾ ರ‍್ಯಾಲಿಯಲ್ಲಿ ಪಾಲ್ಗೊಂಡು ಮತಯಾಚನೆ ನಡೆಸಿದರು. ಈ ಸಂದರ್ಭದಲ್ಲಿ ಅವರು, ಮಾತನಾಡಿ ಕಳೆದ ಹತ್ತು ವರ್ಷಗಳಲ್ಲಿ ಎನ್‌ಡಿಎ ಸರ್ಕಾರ ೨೫ ಕೋಟಿಗೂ ಅಧಿಕ ಜನರನ್ನು ಬಡತನ ರೇಖೆಯಿಂದ ಮೇಲಕ್ಕೆ ತಂದಿದೆ ಎಂದರು. ಬಡವರಿಗೆ ಉಚಿತ ಪಡಿತರ ಯೋಜನೆಯನ್ನು ಇನ್ನು ಐದು ವರ್ಷ ಮುಂದುವರಿಸಲಾಗುವುದು ಎಂದು ಅವರು ಹೇಳಿದರು. ಇದುವರೆಗೆ ತಮ್ಮ ಸರ್ಕಾರದ ವಿರುದ್ಧ ಯಾವುದೇ ಒಂದು ಭ್ರಷ್ಟಾಚಾರ, ಹಗರಣಗಳ ಆಪಾಧನೆ ಇಲ್ಲ ಎಂದು ನರೇಂದ್ರ ಮೋದಿ ತಿಳಿಸಿದರು. ಜಾರ್ಖಂಡ್ ಮುಕ್ತಿ ಮೋರ್ಚಾ ಹಾಗೂ ಕಾಂಗ್ರೆಸ್ ಧುರೀಣರು ಭ್ರಷ್ಟಾಚಾರದ ಮೂಲಕ ಕೋಟ್ಯಾಂತರ ರೂಪಾಯಿ ಮೌಲ್ಯದ ಆಸ್ತಿಯನ್ನು ಮಾಡುತ್ತಿದ್ದಾರೆ ಎಂದು ಅವರು ಆಪಾದಿಸಿದರು. ಮಹಿಳೆಯರು ಮತ್ತು ಉದ್ಯೋಗಾರ್ಥಿಗಳಿಗಾಗಿ ಉಜ್ವಲ ಯೋಜನೆ, ಮುದ್ರಾ ಯೋಜನೆ, ಆವಾಸ್ ಯೋಜನೆ ಸೇರಿದಂತೆ ಮೊದಲಾದ ಯೋಜನೆಗಳನ್ನು ಜಾರಿಗೊಳಿಸಲಾಗಿದೆ ಎಂದು ನರೇಂದ್ರ ಮೋದಿ ಹೇಳಿದರು.

**<><*<><>*><>**

ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾದ್ರಾ ಅವರು, ಗುಜರಾತ್‌ನ ಬನಸ್‌ಕಾಂತದಲ್ಲಿಂದು ಚುನಾವಣಾ ರ‍್ಯಾಲಿ ಉದ್ದೇಶಿಸಿ ಮಾತನಾಡಿದರು. ತಮ್ಮ ಪಕ್ಷ ಅಧಿಕಾರಕ್ಕೆ ಬಂದರೆ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತರಿಪಡಿಸುವ ಖಾಯಂ ಆಯೋಗ ಸ್ಥಾಪಿಸುವ ಮೂಲಕ ರೈತರ ಹಿತಾಸಕ್ತಿ ಕಾಪಾಡುವುದಾಗಿ ಹೇಳಿದರು. ಬಡಜನರ ಸಮಸ್ಯೆಗಳನ್ನು ಕೇಳುವ ಉದ್ದೇಶದಿಂದಲೇ ಭಾರತ್ ಜೋಡೊ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು ಎಂದು ಅವರು ಹೇಳಿದರು. ಆಡಳಿತರೂಢ ಬಿಜೆಪಿ, ನಿರುದ್ಯೋಗ ಹಾಗೂ ಹಣದುಬ್ಬರ ತಡೆಗೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಟೀಕಿಸಿದ ಪ್ರಿಯಾಂಕಾ ಗಾಂಧಿ, ಇದು ಬಡವರ ಹಾಗೂ ಶ್ರೀಮಂತರ ನಡುವಿನ ಅಂತರ ಹೆಚ್ಚಿಸಿದೆ ಎಂದು ಹೇಳಿದರು. ನಂತರ ಕರ್ನಾಟಕದ ದಾವಣಗೆರೆಯಲ್ಲಿ ಚುನಾವಣಾ ರ‍್ಯಾಲಿಯಲ್ಲಿ ಮಾತನಾಡಿ, ಕರ್ನಾಟಕ ಸರ್ಕಾರ ಜಾರಿಗೊಳಿಸಿರುವ ಗ್ಯಾರಂಟಿ ಯೋಜನೆಗಳು ದೇಶಕ್ಕೆ ಮಾದರಿಯಾಗಿವೆ ಎಂದು ಹೇಳಿದರು. ಕೇಂದ್ರದಲ್ಲಿ ಅಧಿಕಾರದಲ್ಲಿರುವ ಬಿಜೆಪಿ ಸರ್ಕಾರ ಜನಪರವಾದ ಯಾವುದೇ ಕೆಲಸ ಮಾಡಿಲ್ಲ. ದೇಶದ ೭೦ ಕೋಟಿ ಯುವ ಜನತೆ ನಿರುದ್ಯೋಗಿಗಳಾಗಿದ್ದಾರೆ. ಅವರ ಭವಿಷ್ಯ ಕಮರಿ ಹೋಗುತ್ತಿದೆ ಎಂದು ಪ್ರಿಯಾಂಕಾ ಗಾಂಧಿ ಆಪಾದಿಸಿದರು.

**ಧ್ವನಿ: ಪ್ರಿಯಾಂಕಾ ಗಾಂಧಿ**

ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದ ರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಉಪಸ್ಥಿತರಿದ್ದರು.

**<><*<><>*><>**

ಬಿಜೆಪಿ ಹಿರಿಯ ನಾಯಕ ಅಮಿತ್ ಶಾ ಅವರು, ಗುಜರಾತ್‌ನ ಚೋಟಾ ಉದಯ್‌ಪುರದಲ್ಲಿಂದು ಚುನಾವಣಾ ರ‍್ಯಾಲಿಯಲ್ಲಿ ಪಾಲ್ಗೊಂಡರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಬಿಜೆಪಿ ಬಡ ಹಾಗೂ ದುರ್ಬಲ ವರ್ಗದವರ ಆರ್ಥಿಕ ಅಭಿವೃದ್ಧಿಗೆ ಬದ್ಧವಾಗಿದೆ ಎಂದು ಹೇಳಿದರು. ನಂತರ ಅಮಿತ್ ಶಾ ಅವರು, ನವಸಾರಿಯ ವನ್ಸ್‌ದಲ್ಲಿ ಮಾತನಾಡಿ, ಮೀಸಲಾತಿ, ಪರಿಶಿಷ್ಟ ಜಾತಿ, ಬುಡಕಟ್ಟು ಜನಾಂಗ ಹಾಗು ಇತರ ಹಿಂದುಳಿದ ವರ್ಗಗಳ ಸಾಂವಿಧಾನಿಕ ಹಕ್ಕಾಗಿದ್ದು, ಬಿಜೆಪಿ ಅಧಿಕಾರದಲ್ಲಿರುವವರೆಗೆ ಮೀಸಲಾತಿ ಹಾಗೇಯೆ ಇರುತ್ತದೆ ಎಂದು ಹೇಳಿದರು. ತಮ್ಮ ಪಕ್ಷ, ಸಮಾಜದ ಎಲ್ಲ ವರ್ಗದ ಜನರ ಕಲ್ಯಾಣಕ್ಕಾಗಿ ಶ್ರಮಿಸುತ್ತದೆ ಎಂದು ಹೇಳಿದ ಅವರು, ಮೀಸಲಾತಿ ವ್ಯವಸ್ಥೆ ಕುರಿತಂತೆ ಕಾಂಗ್ರೆಸ್ ಪಕ್ಷ ತಪ್ಪು ಮಾಹಿತಿ ಹರಡುತ್ತಿದೆ ಎಂದು ಆಪಾಧಿಸಿದರು.

**<><*<><>*><>**

ಬಹುಜನ ಪಕ್ಷದ ಅಧ್ಯಕ್ಷೆ ಮಾಯಾವತಿ, ಉತ್ತರ ಪ್ರದೇಶದ ಆಗ್ರಾದಲ್ಲಿಂದು ತಮ್ಮ ಪಕ್ಷದ ಅಭ್ಯರ್ಥಿ ಪರ ಚುನಾವಣಾ ಪ್ರಚಾರ ನಡೆಸಿದರು. ಹೆಚ್ಚುತ್ತಿರುವ ಹಣದುಬ್ಬರ ಹಾಗೂ ನಿರುದ್ಯೋಗ ಸಮಸ್ಯೆಗಳಿಂದಾಗಿ ದೇಶದ ಜನತೆ ಸಂಕಷ್ಟ ಎದುರಿಸುತ್ತಿದ್ದಾರೆ ಎಂದು ದೂರಿದ ಮಾಯಾವತಿ ಅವರು, ಯುವ ಜನತೆಗೆ

ಉದ್ಯೋಗ ನೀಡುವ ಮೂಲಕ ಮಾತ್ರ ಬಡತವನ್ನು ನಿವಾರಿಸಬಹುದು ಎಂದರು. ಕಾಂಗ್ರೆಸ್ ಹಾಗೂ ಬಿಜೆಪಿ ಎರಡೂ ಪಕ್ಷಗಳು ಪರಿಶಿಷ್ಟ ಜಾತಿ, ಬುಡಕಟ್ಟು ಜನಾಂಗ, ಇತರ ಹಿಂದುಳಿದ ಸಮುದಾಯಗಳ ಮೀಸಲಾತಿ ವಿರೋಧಿಯಾಗಿವೆ ಎಂದು ಆಪಾದಿಸಿದರು.

**<><*<><>*><>**

ಭಾರತದ ಲೋಕಸಭಾ ಚುನಾವಣೆಯನ್ನು ವೀಕ್ಷಿಸಲು ೨೩ ದೇಶಗಳ ಚುನಾವಣಾ ನಿರ್ವಹಣಾ ಸಂಸ್ಥೆಗಳಿಂದ ಎಪ್ಪತ್ತೈದು ಅಂತಾರಾಷ್ಟ್ರೀಯ ಪ್ರತಿನಿಧಿಗಳು ಆಗಮಿಸಿದ್ದಾರೆ. ಅತ್ಯುನ್ನತ ಗುಣಮಟ್ಟದ ಸಾರ್ವತ್ರಿಕ ಚುನಾವಣೆಗಳನ್ನು ನಡೆಸುವ ತನ್ನ ಬದ್ಧತೆಗೆ ನೇರವಾಗಿ ಸಾಕ್ಷಿಯಾಗಲು ಚುನಾವಣಾ ಆಯೋಗವು ನೀಡಿದ ಆಹ್ವಾನದ ಮೇರೆಗೆ ಈ ಪ್ರತಿನಿಧಿಗಳು ಆಗಮಿಸಿದ್ದಾರೆ. ಅಂತಾರಾಷ್ಟ್ರೀಯ ಪ್ರತಿನಿಧಿಗಳು ಭೇಟಿಯ ಸಮಯದಲ್ಲಿ, ಆರು ದಿನಗಳ ಕಾಲ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮವು ವಿದೇಶಿ ಚುನಾವಣಾ ನಿರ್ವಹಣಾ ಸಂಸ್ಥೆಗಳಿಗೆ ಭಾರತದ ಚುನಾವಣಾ ವ್ಯವಸ್ಥೆಯ ಸೂಕ್ಷ್ಮತೆಗಳು ಮತ್ತು ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವವು ಬಳಸುವ ಉತ್ತಮ ಅಭ್ಯಾಸಗಳನ್ನು ಪರಿಚಯಿಸಲು ಪ್ರಯತ್ನಿಸುತ್ತದೆ ಎಂದು ಚುನಾವಣಾ ಆಯೋಗ ಹೇಳಿದೆ. ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಮತ್ತು ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಮತ್ತು ಡಾ.ಸುಖ್ಬೀರ್ ಸಿಂಗ್ ಸಂಧು ಅವರು ನಾಳೆ ಪ್ರತಿನಿಧಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ನಂತರ ಪ್ರತಿನಿಧಿಗಳು ಮಹಾರಾಷ್ಟ್ರ, ಗೋವಾ, ಗುಜರಾತ್, ಕರ್ನಾಟಕ, ಮಧ್ಯಪ್ರದೇಶ ಮತ್ತು ಉತ್ತರ ಪ್ರದೇಶ ರಾಜ್ಯಗಳಿಗೆ ಭೇಟಿ ನೀಡಿ ವಿವಿಧ ಕ್ಷೇತ್ರಗಳಲ್ಲಿ ಮತದಾನ ಮತ್ತು ಸಂಬಂಧಿತ ಸಿದ್ಧತೆಗಳನ್ನು ವೀಕ್ಷಿಸಲಿದ್ದಾರೆ. ಈ ಕಾರ್ಯಕ್ರಮವು ಈ ತಿಂಗಳ ೯ ರಂದು ಕೊನೆಗೊಳ್ಳುತ್ತದೆ.

**<><*<><>*><>**

ಲೋಕಸಭೆಯ ನಾಲ್ಕನೇ ಹಂತದ ಚುನಾವಣಾ ಮತಕ್ಷೇತ್ರಗಳಲ್ಲಿ ಮೇ ೧೩ ರಂದು ಮತದಾನ ನಡೆಯಲಿದೆ.

**<><*<><>*><>**

ಸಾರ್ವತ್ರಿಕ ಚುನಾವಣೆಯ ಐದನೇ ಹಂತದ ನಾಮಪತ್ರಗಳ ಪರಿಶೀಲನೆ ಇಂದು ನಡೆಯಿತು. ಈ ಹಂತದ ಚುನಾವಣೆಗೆ ನಾಮಪತ್ರ ಸಲ್ಲಿಕೆ ನಿನ್ನೆ ಕೊನೆಗೊಂಡಿದೆ. ನಾಮಪತ್ರ ಹಿಂಪಡೆಯಲು ಸೋಮವಾರ ಕೊನೆಯ ದಿನವಾಗಿದೆ. ಐದನೇ ಹಂತದಲ್ಲಿ ಆರು ರಾಜ್ಯಗಳು ಮತ್ತು ಎರಡು ಕೇಂದ್ರಾಡಳಿತ ಪ್ರದೇಶಗಳ ೪೯ ಲೋಕಸಭಾ ಸ್ಥಾನಗಳಿಗೆ ಈ ತಿಂಗಳ ೨೦ ರಂದು ಮತದಾನ ನಡೆಯಲಿದೆ.

**<><*<><>*><>**

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಗುಜರಾತ್ ಟೈಟಾನ್ಸ್ ಮುಖಾಮುಖಿಯಾಗಿವೆ. ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಪ್ಲೇ ಆಫ್‌ನಲ್ಲಿ ಉಳಿದುಕೊಳ್ಳಲು ಈ ಪಂದ್ಯದಲ್ಲಿ ಜಯಗಳಿಸುವುದು ಎರಡೂ ತಂಡಗಳಿಗೆ ಅತ್ಯಂತ ಮುಖ್ಯವಾಗಿದೆ. ಇದುವರೆಗೆ ಎರಡೂ ತಂಡಗಳು ನಾಲ್ಕು ಬಾರಿ ಮುಖಾಮುಖಿಯಾಗಿದ್ದು, ಉಭಯ ತಂಡಗಳು ತಲಾ ಎರಡು ಬಾರಿ ಜಯಗಳಿಸಿವೆ.

**<><*<><>*><>**

ಉತ್ತರಾಖಂಡದ ಮಸೂರಿ-ಡೆಹರಾಡೂನ್ ರಸ್ತೆಯಲ್ಲಿ ಜರಿಪಾನಿ ಬಳಿ ಇಂದು ಸಂಭವಿಸಿದ ಲಾರಿ ಅಪಘಾತದಲ್ಲಿ ಐವರು ಮೃತಪಟ್ಟಿದ್ದಾರೆ. ಲಾರಿ ರಸ್ತೆ ಪಕ್ಕದ ಗುಂಡಿಗೆ ಬಿದ್ದು ಈ ಅಪಘಾತ ಸಂಭವಿಸಿದೆ. ಈ ಘಟನೆಯಲ್ಲಿ ಗಾಯಗೊಂಡಿರುವ ಓರ್ವ ಬಾಲಕಿಯ ಸ್ಥಿತಿ ಗಂಭೀರವಾಗಿದೆ ಎಂದು ಜಿಲ್ಲಾ ಪೊಲೀಸ್ ಮುಖ್ಯಸ್ಥರು ತಿಳಿಸಿದ್ದಾರೆ.

**<><*<><>*><>**

ಕೇರಳ ಮತ್ತು ತಮಿಳುನಾಡು ಕರಾವಳಿಗಳಲ್ಲಿ ಬಲಿಷ್ಟ ಶಕ್ತಿಯ ಎತ್ತರ ಅಲೆಗಳು ಅಪ್ಪಳಿಸಬಹುದು ಎಂದು ಸಾಗರ ಮಾಹಿತಿ ಸೇವೆಯ ಭಾರತೀಯ ರಾಷ್ಟ್ರೀಯ ಕೇಂದ್ರ ಎಚ್ಚರಿಕೆ ನೀಡಿದೆ. ಈ ಪರಿಸ್ಥಿತಿ ನಾಳೆ ರಾತ್ರಿ ೧೧.೩೦ ರವರೆಗೆ ಇರುವ ನಿರೀಕ್ಷೆಯಿದೆ ಎಂದು ತಿಳಿಸಲಾಗಿದೆ. ರೆಡ್ ಅಲರ್ಟ್ ನೀಡಲಾಗಿರುವ ಕೇರಳದ ಕರಾವಳಿ ಪ್ರದೇಶಗಳಲ್ಲಿ ಇದುವರೆಗೆ ಎತ್ತರ ಅಲೆಗಳ ಬಡಿತ ವರದಿಯಾಗಿಲ್ಲ. ಆದರೂ ತಳಮಟ್ಟದ ಪ್ರದೇಶಗಳಲ್ಲಿ ಸಮುದ್ರ ನೀರು ಮುನ್ನುಗ್ಗುವ ಕಳ್ಳ ಕಡಲ್ ಸಂಭವಿಸಬಹುದು ಎಂದು ಎಚ್ಚರಿಸಲಾಗಿದೆ. ಜನರು ಕಡಲತೀರದಲ್ಲಿ ಸಂಚರಿಸದಂತೆ ಹಾಗೂ ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಸೂಚಿಸಲಾಗಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಿಗ್ಗೆ ೭.೩೫ ಕ್ಕೆ <><*<>**